# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1413**
**ಸದಸ್ಯರು ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**
**ಉತ್ತರಿಸಬೇಕಾದ ದಿನಾಂಕ : 18-03-2020**
**ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರತಿದಿನವೂ ನಗರ ಹಾಗೂ ಗ್ರಾಮೀಣ ಪ್ರದೇಶದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ತಾಲ್ಲೂಕು ಕಛೇರಿ ಕೆಲಸಕ್ಕೆ ಬರುತ್ತಿದ್ದು, ಅವರಿಗೆ ಸೂಕ್ತ ನಾಗರೀಕ ಸೌಲಭ್ಯ ಕಲ್ಪಿಸದೇ ಅನಾನುಕೂಲ ವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ತಾಲ್ಲೂಕು ಕಛೇರಿಗೆ ಆಗಮಿಸುವ ಸಾರ್ವಜನಿಕರಿಗೆ ನಾಗರೀಕ ಸೌಲಭ್ಯವನ್ನು ಕಲ್ಪಿಸಲಾಗಿರುವುದರಿಂದ ಯಾವುದೇ ಅನಾನುಕೂಲಗಳು ಇರುವುದಿಲ್ಲ. |
| (ಆ) | ಚಾಮರಾಜನಗರ ತಾಲ್ಲೂಕು ಕಛೇರಿ ಬಳಿ, ಸಾರ್ವಜನಿಕರಿಗೆ ಕುಡಿಯುವ ನೀರು, ಶೌಚಾಲಯ, ಕುಳಿತುಕೊಳ್ಳಲು ಜಾಗ ಹಾಗೂ ಆಸನಗಳ ವ್ಯವಸ್ಥೆ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ; | ಚಾಮರಾಜನಗರ ತಾಲ್ಲೂಕು ಕಛೇರಿಯಲ್ಲಿ ಸಾರ್ವಜನಿಕರಿಗೆ ಶೌಚಾಲಯ, ಕುಳಿತುಕೊಳ್ಳಲು ಆಸನಗಳ ವ್ಯವಸ್ಥೆಯನ್ನು ಪಡಸಾಲೆಯಲ್ಲಿ ಕಲ್ಪಿಸಲಾಗಿದ್ದು, ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ. |
| (ಇ) | ಈ ಬಗ್ಗೆ ಸಾರ್ವಜನಿಕರು ಜಿಲ್ಲಾಧಿಕಾರಿಗಳಿಗೆ ಅಹವಾಲು ಸಲ್ಲಿಸಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಈ ವಿಷಯದ ಬಗ್ಗೆ ಚಾಮರಾಜನಗರ ಜಿಲ್ಲಾಧಿಕಾರಿ ಕಛೇರಿಯಲ್ಲಿ ಸಾರ್ವಜನಿಕರು ಜಿಲ್ಲಾಧಿಕಾರಿಗಳಿಗೆ ಅಹವಾಲುಗಳನ್ನು ಸಲ್ಲಿಸಿರುವುದಿಲ್ಲ. |

**ಕಂಇ 09 ವಿಮಕ 2020**

(ಆರ್. ಅಶೋಕ)
**ಕಂದಾಯ ಸಚಿವರು**